# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ :1064
ಉತ್ತರಿಸಬೇಕಾಗಿದ್ದ ದಿನಾಂಕ : 25.02.2022.
ಸದಸ್ಯರ ಹೆಸರು : ಶ್ರೀ ಹೆಚ್.ಎಂ ರಮೇಶ್ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ಸಚಿವರು : ಮಾನ್ಯ ರೇಷ್ಮೆ,ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯಾದ್ಯಂತ ಯುವ ಸಬಲೀಕರಣ ಕೇಂದ್ರಗಳನ್ನು ಸ್ಥಾಪಿಸಲಾಗಿದೆಯೇ; ರಾಜ್ಯದ ಯಾವ ಯಾವ ಜಿಲ್ಲಾ ಕೇಂದ್ರಗಳಲ್ಲಿ ಸ್ಥಾಪಿಸಲಾಗಿದೆ; (ವಿವರ ನೀಡುವುದು) | ಹೌದು.<br><br>ರಾಜ್ಯದ 30 ಜಿಲ್ಲೆಗಳಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಕ್ರೀಡಾಂಗಣಗಳಲ್ಲಿ ಯುವ ಸ್ಪಂದನ ಕೇಂದ್ರ (ಯುವ ಸಬಲೀಕರಣ ಕೇಂದ್ರ) ಗಳನ್ನು ತೆರೆಯಲಾಗಿದೆ. |
| ಆ. | ಯುವ ಸಬಲೀಕರಣ ಕೇಂದ್ರಗಳ ಗುರಿ ಮತ್ತು ಉದ್ದೇಶಗಳೇನು; ಈ ಯೋಜನೆಗಾಗಿ ಸರ್ಕಾರವು ಒದಗಿಸುತ್ತಿರುವ ಅನುದಾನವೆಷ್ಟು; (ವಿವರ ನೀಡುವುದು) | ಯುವ ಸ್ಪಂದನ ಕೇಂದ್ರಗಳು ಕೆಳಕಂಡ ಗುರಿ ಮತ್ತು ಉದ್ದೇಶಗಳನ್ನು ಹೊಂದಿರುತ್ತವೆ:-<br>1) ಯುವ ಜನರು ಸಬಲರಾಗಲು, ಅವರು ತಮ್ಮಲ್ಲಿನ ಸಾಮರ್ಥ್ಯಗಳನ್ನು ಕಂಡುಕೊಳ್ಳುವಲ್ಲಿ ಅಗತ್ಯ ಪೂರಕ ವಾತಾವರಣ & ಸೌಲಭ್ಯಗಳನ್ನು ಒದಗಿಸುವುದು.<br>2) ಯುವ ಜನರು ತಮ್ಮ ಜ್ಞಾನ, ಕೌಶಲ್ಯ, ಸ್ವಭಾವ ಮತ್ತು ನಡವಳಿಕೆಯನ್ನು ಉನ್ನತೀಕರಿಸಿಕೊಳ್ಳಲು ತಮ್ಮನ್ನು ಧನಾತ್ಮಕವಾಗಿ ಬದಲಾಯಿಸಿ ಕೊಳ್ಳುವಂತೆ ಮಾಡುವುದು.<br>3) ಯುವಜನರು ತಮ್ಮ ಪ್ರತಿಭೆ ಮತ್ತು ಸಾಮರ್ಥ್ಯಕ್ಕೆ ಸೂಕ್ತವಾದ ಶಿಕ್ಷಣ ಹಾಗೂ ಕೌಶಲ್ಯಗಳನ್ನು ಪಡೆಯಲು ಅಗತ್ಯವಾದ ಸಂಪರ್ಕ ಸೇತುವಾಗಿ ಕಾರ್ಯನಿರ್ವಹಿಸುವುದು.<br>4) ಯುವಜನ ಅಭಿವೃದ್ಧಿಗಾಗಿ ಇರುವ ಎಲ್ಲಾ ಕಾರ್ಯಕ್ರಮಗಳ ಪ್ರಯೋಜನ ಪಡೆಯಲು ಯುವಜನರಿಗೆ ಏಕಗವಾಕ್ಷಿ ಕೇಂದ್ರವಾಗಿ ಕಾರ್ಯನಿರ್ವಹಿಸುವುದು.<br>ಈ ಯುವ ಸ್ಪಂದನ ಕಾರ್ಯಕ್ರಮದಡಿ ಯುವ ಜನರ ಮಾಸಿಕ ಆರೋಗ್ಯವನ್ನು ಸದೃಢಗೊಳಿಸಲು ಮತ್ತು ಜೀವನ ಕೌಶಲ್ಯಾಭಿವೃದ್ಧಿ ಕಾರ್ಯಕ್ರಮವನ್ನು ನಿಮ್ಹಾನ್ಸ್ ಸಂಸ್ಥೆಯ ಸಹಯೋಗದಲ್ಲಿ ಅನುಷ್ಠಾನಗೊಳಿಸಲು 2021-22ನೇ ಸಾಲಿಗೆ ರೂ.250.00 ಲಕ್ಷಗಳ ಅನುದಾನವನ್ನು ನಿಮ್ಹಾನ್ಸ್ ಸಂಸ್ಥೆಗೆ ಬಿಡುಗಡೆ ಮಾಡಲಾಗಿದೆ. |

| | | |
|---|---|---|
| ಇ. | ರಾಜ್ಯದ ಜಿಲ್ಲೆಗಳಲ್ಲಿ ಯುವ ಸಬಲೀಕರಣ ಕೇಂದ್ರ ಸ್ಥಾಪಿಸಿ ಎಷ್ಟು ಜನ ನಿರುದ್ಯೋಗಿಗಳಿಗೆ ಮತ್ತು ವಿದ್ಯಾರ್ಥಿಗಳಿಗೆ ಇಂಟರ್ನ್ ಶಿಪ್ ತರಬೇತಿ ನೀಡಿ ಉದ್ಯೋಗ ಒದಗಿಸಲಾಗಿದೆ; (ವಿವರ ನೀಡುವುದು) | ರಾಜ್ಯದ ಯುವ ಸ್ಪಂದನ ಕೇಂದ್ರಗಳಲ್ಲಿ ನಿರುದ್ಯೋಗಿಗಳಿಗೆ ಉದ್ಯೋಗವನ್ನು ಹೊರತುಪಡಿಸಿ 5,43,225 ಯುವಕರು ಮತ್ತು 5,59,616 ಯುವತಿಯರು ಸೇರಿದಂತೆ ಒಟ್ಟು 11,02,841 ಯುವಜನರಿಗೆ ಮಾರ್ಗದರ್ಶನ (Counselling)ವನ್ನು ನೀಡಲಾಗಿದೆ. |
| ಈ. | ನಿರುದ್ಯೋಗಿಗಳನ್ನು ಗುರುತಿಸಿ ಯುವ ಸಬಲೀಕರಣ ಕೇಂದ್ರದ ಮೂಲಕ ಅಗತ್ಯ ತರಬೇತಿಗಳನ್ನು ನೀಡಿ ಅವರ ಕೌಶಲ್ಯಕ್ಕನುಗುಣವಾಗಿ ಉದ್ಯೋಗಗಳನ್ನು ದೊರಕಿಸಿಕೊಡಲು ಸರ್ಕಾರವು ಹಮ್ಮಿಕೊಂಡಿರುವ ಬೇರೆ ಬೇರೆ ಕಾರ್ಯಕ್ರಮಗಳೇನು? (ವಿವರ ನೀಡುವುದು) | ಪ್ರಸ್ತುತ ಸದರಿ ಕೇಂದ್ರಗಳ ಮೂಲಕ ಇಲಾಖೆಯಲ್ಲಿ ಯುವಕ/ಯುವತಿಯರಿಗಾಗಿ ಇರುವ ಕಾರ್ಯಕ್ರಮಗಳ ಕುರಿತಂತೆ ಮಾಹಿತಿ ಹಾಗೂ ಮಾರ್ಗದರ್ಶನಗಳನ್ನು ನೀಡಲಾಗುತ್ತಿದೆ. ಇಲಾಖೆಯ ಹಾಗೂ ಇತರ ಇಲಾಖೆಗಳಲ್ಲಿ ಇರುವ ತರಬೇತಿ ಕಾರ್ಯಕ್ರಮಗಳ ಬಗ್ಗೆ ಅರಿವು ಮೂಡಿಸಲಾಗುತ್ತಿದೆ. ಅಲ್ಲದೆ, ಅವರಲ್ಲಿ ಕೌಶಲ್ಯಾಭಿವೃದ್ಧಿ ಯೋಜನೆಗಳ ಬಗ್ಗೆ ಅರಿವು ಮೂಡಿಸಿ ಕೌಶಲ್ಯ ತರಬೇತಿ ಪಡೆಯಲು ಪ್ರೇರೆಪಿಸಲಾಗುತ್ತಿದೆ. ನೇರವಾಗಿ ಯುವ ಸಬಲೀಕರಣ ಕೇಂದ್ರದ ಮೂಲಕ ಉದ್ಯೋಗಗಳನ್ನು ಒದಗಿಸಿಕೊಡುವ ಕಾರ್ಯಕ್ರಮಗಳು ಇರುವುದಿಲ್ಲ. |

**ವೈಎಸ್‌ ಡಿ/ಇವೈಡಬ್ಲ್ಯೂ/35/2022**

**(ಡಾ. ನಾರಾಯಣಗೌಡ)**
ರೇಷ್ಮೆ, ಯುವ ಸಬಲೀಕರಣ ಮತ್ತು
ಕ್ರೀಡಾ ಸಚಿವರು